# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಧಾರವಾಡ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯ ಅನುಷ್ಠಾನ ಏಜೆನ್ಸಿಯನ್ನು ಗೊತ್ತುಪಡಿಸುವ ಬಗ್ಗೆ

**ಓದಲಾಗಿದೆ :**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 111 ತಾಪಸ 2010, ದಿನಾಂಕ:21.10.2011
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 84 ಗ್ರಾಪಂಅ 2014, ದಿನಾಂಕ:20.06.2015
3) ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಗ್ರಾಅಪ 84 ಗ್ರಾಪಂಅ 2014, ದಿನಾಂಕ:25.06.2015
4) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರ ಪತ್ರ ಸಂಖ್ಯೆ: ರಾಗ್ರಾಸಂ.ಆಡಳಿತ(2).ಕಟ್ಟಡ.ಸಿ.ಆರ್-01/2012-13/579, ದಿನಾಂಕ:16.11.2015
5) ಸರ್ಕಾರದ ಅಧಿಸೂಚನೆ ಸಂಖ್ಯೆ: ಆಇ 76 ವೆಚ್ಚ-12/16, ದಿನಾಂಕ:26.02.2016

**ಪ್ರಸ್ತಾವನೆ :**

ಓದಲಾದ(1)ರ ಸರ್ಕಾರದ ಆದೇಶದ ಮೂಲಕ ಧಾರವಾಡದಲ್ಲಿ ಸ್ಥಾಪಿಸಲಾಗಿರುವ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡವನ್ನು ಒಟ್ಟು ರೂ.7.05 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲು ನಿರ್ಣಯಿಸಲಾಗಿದೆ. ಅದರಂತೆ, ಓದಲಾದ (2) ಮತ್ತು (3)ರ ಸರ್ಕಾರದ ಆದೇಶ ಹಾಗು ತಿದ್ದುಪಡಿ ಆದೇಶದ ಮೂಲಕ ಕಟ್ಟಡ ನಿರ್ಮಾಣ ಕಾಮಗಾರಿಗೆ ಮೊದಲ ಕಂತಾಗಿ ರೂ.2.35 ಕೋಟಿಗಳನ್ನು ತಾತ್ಕಾಲಿಕ ವ್ಯವಸ್ಥೆಯಾಗಿ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ಬಿಡುಗಡೆಗೊಳಿಸಲಾಗಿದೆ. ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸುವ ಕಾರಣಕ್ಕಾಗಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರಿಗೆ ವಹಿಸಿಕೊಡುವ ಬಗ್ಗೆ ಓದಲಾದ(4)ರ ಪತ್ರದಲ್ಲಿ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆ, ಮೈಸೂರು ಇವರು ಸರ್ಕಾರಕ್ಕೆ ಮನವಿ ಮಾಡಿರುತ್ತಾರೆ. ಅದರಂತೆ, ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರಿಗೆ ನೇರವಾಗಿ ವಹಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ವಿನಾಯಿತಿ ನೀಡಲು ಆರ್ಥಿಕ ಇಲಾಖೆಯನ್ನು ಕೋರಲಾಗಿತ್ತು. ಓದಲಾದ(5)ರ ಸರ್ಕಾರದ ಅಧಿಸೂಚನೆಯಲ್ಲಿ ಆರ್ಥಿಕ ಇಲಾಖೆಯು, ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯಗಳ ಅಭಿವೃದ್ಧಿ ನಿಗಮ ನಿಯಮಿತ ಇವರಿಗೆ ನೇರವಾಗಿ ವಹಿಸಲು ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ವಿನಾಯಿತಿ ನೀಡಿ ಆದೇಶಿಸಿರುತ್ತದೆ. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಧಾರವಾಡ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಅಂದಾಜು ಮೊತ್ತ ರೂ.7.05 ಕೋಟಿಗಳ ವೆಚ್ಚದಲ್ಲಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರಿಗೆ ನೇರವಾಗಿ ವಹಿಸಿ ನಿರ್ಮಾಣ ಮಾಡಲು ಸರ್ಕಾರದ ಆದೇಶವನ್ನು ಹೊರಡಿಸುವ ಅಗತ್ಯವಿದೆ. ಅದಕ್ಕಾಗಿ ಈ ಆದೇಶ -

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 84 ಗ್ರಾಪಂಅ 2014, ಬೆಂಗಳೂರು, ದಿನಾಂಕ: 30-03-2016**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದುಕೊಂಡು, ಧಾರವಾಡ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಅಂದಾಜು ಮೊತ್ತ ರೂ.7.05 ಕೋಟಿಗಳ ವೆಚ್ಚದಲ್ಲಿ ನಿರ್ಮಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ-1999ರ ಕಲಂ 4(ಜಿ)ರಡಿ ವಿನಾಯಿತಿ ನೀಡಿ ನೇರವಾಗಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರಿಗೆ ವಹಿಸಿ ಆದೇಶಿಸಲಾಗಿದೆ.

ಓದಲಾದ (2) ಮತ್ತು (3)ರ ಸರ್ಕಾರದ ಆದೇಶಗಳ ಮೂಲಕ ನಿರ್ಮಾಣ ಕಾಮಗಾರಿಗೆ ತಾತ್ಕಾಲಿಕ ವ್ಯವಸ್ಥೆಯಾಗಿ ಮೊದಲ ಕಂತಾಗಿ ಬಿಡುಗಡೆಗೊಳಿಸಿರುವ ರೂ.2.35 ಕೋಟಿಗಳ (ರೂಪಾಯಿ ಎರಡು ಕೋಟಿ ಮೂವತ್ತೈದು ಲಕ್ಷಗಳು ಮಾತ್ರ) ಮೊತ್ತವನ್ನು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರಿಗೆ ಒದಗಿಸುವುದು.

ಕಾಮಗಾರಿಯ ನಿರ್ವಹಣೆಗೆ ಸಂಬಂಧಿಸಿದಂತೆ, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ ಇವರಿಗೆ ವಿಧಿಸಲಾಗುತ್ತಿರುವ ಷರತ್ತುಗಳು.

1) ಕಾಮಗಾರಿಯ ವಿನ್ಯಾಸ ಮತ್ತು ರೂ.7.05 ಕೋಟಿಗಳಿಗೆ ಅಂದಾಜು ಪತ್ರಿಕೆಯನ್ನು ತಯಾರಿಸಿ ಸರ್ಕಾರಕ್ಕೆ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳುವುದು.
2) ಕಟ್ಟಡ ನಿರ್ಮಾಣ ಉದ್ದೇಶಕ್ಕಾಗಿ ಬಿಡುಗಡೆಗೊಳಿಸಿದ ಅನುದಾನವನ್ನು ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.
3) ಕಟ್ಟಡ ನಿರ್ಮಾಣ ಕಾಮಗಾರಿಯನ್ನು ಸಮಂಜಸ ದರದಲ್ಲಿ ಉತ್ತಮ ಗುಣಮಟ್ಟದೊಂದಿಗೆ ನಿರ್ವಹಿಸುವುದು.
4) ಕಟ್ಟಡ ನಿರ್ಮಾಣ ಕಾಮಗಾರಿಯನ್ನು ನಿಗಧಿತ ಕಾಲಮಿತಿಯಲ್ಲಿ ನಿರ್ವಹಿಸಿ ಪೂರ್ಣಗೊಳಿಸಿ ಹಸ್ತಾಂತರಿಸುವುದು.
5) ಅನುದಾನದ ವಿನಿಯೋಗಿತಾ ಪ್ರಮಾಣ ಪತ್ರಗಳನ್ನು ನಿಗಧಿತ ನಮೂನೆಯಲ್ಲಿ ಹಾಗೂ ಕಟ್ಟಡ ಕಾಮಗಾರಿ ಪ್ರಗತಿ ವರದಿಯನ್ನು ಕಾಲ ಕಾಲಕ್ಕೆ ಸರ್ಕಾರಕ್ಕೆ ಸಲ್ಲಿಸುವುದು.
6) ಕಾಲ ಕಾಲಕ್ಕೆ ಸರ್ಕಾರವು ವಿಧಿಸುವ ಇತರೆ ಎಲ್ಲಾ ಷರತ್ತುಗಳು ಹಾಗು ಸೂಚನೆಗಳನ್ನು ತಪ್ಪದೇ ಪಾಲಿಸುವುದು.

ಕರ್ನಾಟಕ ರಾಜ್ಯಪಾರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಬಿ.ಧೋತ್ರೆ)
ಸರ್ಕಾರದ ಅಧೀನ ಕಾರ್ಯದರ್ಶಿ (ಜಿ.ಪಂ.)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಕರ್ನಾಟಕ, ಬೆಂಗಳೂರು.
2) ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು.

....2

3) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ, ಗ್ರಾಮೀಣಾಭಿವೃದ್ಧಿ ಭವನ, ಆನಂದ ರಾವ್ ವೃತ್ತ, ಬೆಂಗಳೂರು.

4) ವಿಶೇಷಾಧಿಕಾರಿ ಹಾಗು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಲೋಕೋಪಯೋಗಿ ಆರ್ಥಿಕ ಕೋಶ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.

5) ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.ಪಂ.ರಾಜ್ ಇಲಾಖೆ.

6) ಗ್ರಾ.ಅ.ಪಂ.ರಾಜ್ ಇಲಾಖೆಯ ಗಣಕ ಕೋಶಕ್ಕೆ – ಇಲಾಖೆ ಗಣಕ ಜಾಲದಲ್ಲಿ ಅಳವಡಿಸಲು.

7) ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾ.ಅ.ಪಂ.ರಾಜ್ ಇಲಾಖೆ – ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು.

**8) ಶಾಖಾ ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.**

**ಪ್ರತಿಯನ್ನು :**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

3) ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.

....3